157 ಶಿಕ್ಷ = (146)
4RR
010126

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಸಿ.ಟಿ.ರವಿ , ಶ್ರೀ ಎನ್ ರವಿಕುಮಾರ್ , ಶ್ರೀ ಪ್ರತಾಪ್ ಸಿಂಹ ನಾಯಕ್, ಶ್ರೀ ಕೇಶವ ಪ್ರಸಾದ್ ಮತ್ತು ಶ್ರೀಮತಿ ಭಾರತಿ ಶೆಟ್ಟಿ ಇವರುಗಳು ನಿಯಮ-72ರಡಿ ಆರೋಗ್ಯ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದ ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಸುಮಾರು 30 ಸಾವಿರ ನೌಕರರು ಕಳೆದ 15-20 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಈ ನೌಕರರು ಕಳೆದ 3 ವರ್ಷಗಳಿಂದ ಮಾನ್ಯ ಸುಪ್ರೀಂ ಕೋರ್ಟ್ ಆದೇಶದಂತೆ ಸಮಾನ ಕೆಲಸಕ್ಕೆ ಸಮಾನ ವೇತನ, ಸೇವಾ ಭದ್ರತೆ, ವರ್ಗಾವಣೆ, ವೈದ್ಯಕೀಯ ಚಿಕಿತ್ಸೆ ಮರು ಪಾವತಿ ಹಾಗೂ ಖಾಯಮಾತಿ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಹೋರಾಟ ಮಾಡುತ್ತಿದ್ದಾರೆ. ಸದರಿಯವರ ಬೇಡಿಕೆಗಳ ಪರಿಶೀಲನೆಗೆ ಈ ಹಿಂದೆ ರಚನೆ ಆಗಿದ್ದ ಸಮಿತಿಯು ದಿನಾಂಕ:28.12.2020 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದರೂ ಈವರೆಗೆ ವರದಿ ಅನುಷ್ಠಾನಕ್ಕೆ ಬಂದಿಲ್ಲ. ಇವರ ಸೇವೆಯನ್ನು ಖಾಯಂ ಮಾಡುವುದಾಗಿ ಸರ್ಕಾರ ಭರವಸೆ ನೀಡಿತ್ತು ಆದರೆ ಭರವಸೆಯಾಗಿಯೇ ಉಳಿದಿದ್ದು, ಅದು ಈಡೇರಿಲ್ಲ. ಈ ಹಿಂದೆ ಮಾಡಿದ್ದ ಶೇ.15% ವೇತನ ಹೆಚ್ಚಳದ ಅನುದಾನವನ್ನು 2023-24ನೇ ಆರ್ಥಿಕ ವರ್ಷಕ್ಕೆ ಬಿಡುಗಡೆ ಮಾಡಿದ್ದು, ನಂತರ ಈವರೆಗೆ ಅನುದಾನ ಬಿಡುಗಡೆ ಆಗಿರುವುದಿಲ್ಲ. ಸರ್ಕಾರ ಕೂಡಲೆ ಬಾಕಿ ಇರುವ ವೇತನ ಹೆಚ್ಚಳದ ಅನುದಾನವನ್ನು ಬಿಡುಗಡೆ ಮಾಡಬೇಕು ಮತ್ತು ಅವರ ಬೇಡಿಕೆಗಳ ಈಡೇರಿಕೆಗೆ ಸಮಿತಿ ಸಲ್ಲಿಸಿರುವ ವರದಿಯನ್ನು ಅನುಷ್ಠಾನಕ್ಕೆ ತರಲು ಕ್ರಮ ಕೈಗೊಳ್ಳಬೇಕೆಂದು ಬಗ್ಗೆ.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾಗಿದ್ದು ಕೇಂದ್ರ ಸರ್ಕಾರದಿಂದ ಅನುಮೋದಿತ ROP ಯಂತೆ ಹಾಗೂ ಕನಿಷ್ಠ ವೇತನ ಕಾಯ್ದೆಯಂತೆ ಮಾಹೆವಾರು ವೇತನವನ್ನು ಪಾವತಿಸಲಾಗುತ್ತಿದೆ. ಇದರೊಂದಿಗೆ ಪ್ರತಿ ವರ್ಷ ಶೇ. 5 ರಷ್ಟು ಹೆಚ್ಚುವರಿ ವೇತನ ಮತ್ತು 3 ವರ್ಷ ಹಾಗೂ 5ವರ್ಷದ ನಂತರ (10% after the completion of 3 years & 5% after completion of 2 more years) Experience Bonus ಮತ್ತು ಹೊರಗುತ್ತಿಗೆ ನೌಕರರಿಗೆ ಪ್ರತಿ ವರ್ಷ ಶೇ. 5ರಷ್ಟು ಹೆಚ್ಚುವರಿ ವೇತನ,ಇ.ಎಸ್.ಐ/ಇ.ಪಿ.ಎಫ್, ಒಟ್ಟು 10 ದಿನಗಳ ಸಾಂದರ್ಭಿಕ ರಜೆ ಮತ್ತು 10 ದಿನಗಳ ವೈದ್ಯಕೀಯ ರಜೆ ಒದಗಿಸಲಾಗುತ್ತಿದೆ.

ದಿನಾಂಕ 28.12.2020ರ ವರದಿಯಂತೆ ಶ್ರೀ ಪಿ.ಎಸ್ ಶ್ರೀನಿವಾಸಾಚಾರಿ, ನಿವೃತ್ತ IAS ಅಧಿಕಾರಿಯವರು ಸಲ್ಲಿಸಿರುವ - ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರ ಬೇಡಿಕೆಗಳ ಕುರಿತು ಸಮಗ್ರ ಮಾನವ ಸಂಪನ್ಮೂಲ ನೀತಿ (Comprehensive HR Policy) ಸಮಿತಿಯ ಶಿಫಾರಸ್ಸುಗಳು ಹಾಗೂ ಅವುಗಳ ಬಗ್ಗೆ ಕೈಗೊಂಡಿರುವ ಕ್ರಮದ ಮಾಹಿತಿ ಕೆಳಕಂಡಂತಿದೆ.

- **HR Policy** - ಕೇಂದ್ರ ಪುರಸ್ಕೃತ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಸಿಬ್ಬಂದಿಗಳ ನೇಮಕಾತಿ, ವರ್ಗಾವಣೆ ಮತ್ತು ನಿಯೋಜನೆ ಕುರಿತು ಗುತ್ತಿಗೆ ನೌಕರರ ಪ್ರತಿನಿಧಿಗಳೊಂದಿಗೆ ಚರ್ಚಿಸಿ ಅವರುಗಳು ಸಲಹೆ ಸೂಚನೆಗಳನ್ನು ನೀಡಿದ್ದಲ್ಲಿ, ಅವುಗಳೊಂದಿಗೆ ಮಾನವ ಸಂಪನ್ಮೂಲ ನೀತಿ(HR Policy) ಯನ್ನು ರೂಪಿಸುವ ಕುರಿತು ಪರಿಶೀಲನೆಯಲ್ಲಿರುತ್ತದೆ.

....2

- **ಜಿಲ್ಲೆಯಿಂದ ಜಿಲ್ಲೆಗೆ ವರ್ಗಾವಣೆ** - NHM ಗುತ್ತಿಗೆ ಸಿಬ್ಬಂದಿಗಳನ್ನು ಬೇರೆ ಜಿಲ್ಲೆಗಳಿಗೆ ವರ್ಗಾವಣೆ ಮಾಡಿದ್ದಲ್ಲಿ ಉಂಟಾಗಬಹುದಾದ ಆರ್ಥಿಕ ಮತ್ತು ಕಾನೂನಾತ್ಮಕ ಪರಿಣಾಮಗಳ ಬಗ್ಗೆ, ಆರ್ಥಿಕ ಇಲಾಖೆಯು ನೀಡಿರುವ ಅಭಿಪ್ರಾಯದನ್ವಯ ಕಾರ್ಯಕಾರಿ ಸಮಿತಿಯ ಅನುಮೋದನೆ ಪಡೆದು ಕ್ರಮಕೈಗೊಳ್ಳಲಾಗುವುದು.

- **ವಿಮೆ** - ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ Axis Bank ನೊಂದಿಗೆ ಒಡಂಬಡಿಕೆ ಮಾಡಿಕೊಂಡು , Term Insurance ಜಾರಿಗೊಳಿಸಲಾಗಿದೆ.

- **ವೈದ್ಯಕೀಯ ಚಿಕಿತ್ಸೆ**- ಗುತ್ತಿಗೆ ಹೊರಗುತ್ತಿಗೆ ಹಾಗೂ ಗೌರವಧನ ಆಧಾರಿತ ಸಿಬ್ಬಂದಿಗಳಿಗೆ ಮತ್ತು ಅವಲಂಭಿತರಿಗೆ ರೂ.5ಲಕ್ಷದವರೆಗೆ ನಗದು ರಹಿತ ಆರೋಗ್ಯ ಯೋಜನೆಗೆ ಅನುಮೋದನೆ ಹಾಗೂ ಸಿಬ್ಬಂದಿಗಳಿಂದ ಮಾಸಿಕ 100 ರೂಗಳ ವಂತಿಕೆ ಮತ್ತು ಸರ್ಕಾರದಿಂದ ಉಳಿಕೆ ಹಣವನ್ನು ಭರಿಸುವ ಯೋಜನೆಯನ್ನು ಆದೇಶ ಸಂಖ್ಯೆ: ಆಕುಕ 324 ಸಿ ಜಿ ಇ 2025, ದಿನಾಂಕ:24.06.2025ರಲ್ಲಿ ಜಾರಿಗೊಳಿಸಲಾಗಿದೆ.

- **ವಿಶೇಷ ನೇಮಕಾತಿ** - ವಿಶೇಷ ನೇಮಕಾತಿ ಅಡಿಯಲ್ಲಿ ಸೇವಾ ಕೃಪಾಂಕ ಹಾಗೂ ವಯೋಮಿತಿ ಸಡಿಲಿಕೆ ಸೌಲಭ್ಯವನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರಿಗೂ ಸಹ ಕಲ್ಪಿಸಲಾಗಿದೆ.

- **ಶೇ. 15ರಷ್ಟು ವೇತನ ಹೆಚ್ಚಳ:** - ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ ಸಿಬ್ಬಂದಿಗಳಿಗೆ ನೀಡುತ್ತಿರುವ ಸಂಭಾವನೆಯನ್ನು ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಶೆ.15ರಷ್ಟು ಹೆಚ್ಚಿಸಿ ಸರ್ಕಾರದ ಆದೇಶ ಸಂಖ್ಯೆ: ಆಕುಕ 43 ಎಫ್ ಪಿ ಎಸ್ 2020, ದಿ:04.03.2023 ಮತ್ತು ಸೇರ್ಪಡೆ ಆದೇಶ ಸಂಖ್ಯೆ;ಆಕುಕ 47 ಎಫ್ ಪಿ ಎಸ್ 2024, ದಿ:22.11.2024 ರಲ್ಲಿ ಆದೇಶಿಸಲಾಗಿದೆ.

- **ಖಾಯಂ**: ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಆರೋಗ್ಯ ಕ್ಷೇತ್ರವನ್ನು ಬಲಪಡಿಸುವ ಒಂದು ಪ್ರಮುಖ ಸುಧಾರಣಾ ಉಪ ಕ್ರಮವಾಗಿದೆ. ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳಿಗೆ ಪೂರಕವಾಗಿ ಯೋಜನೆಗಳನ್ನು ತ್ವರಿತವಾಗಿ ಕಾರ್ಯಗತಗೊಳಿಸುವ ಸಲುವಾಗಿ ಗುತ್ತಿಗೆ/ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಂಡಿರುವುದರಿಂದ ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

**ಸಂಖ್ಯೆ:ಆಕುಕ 151 ಎಸ್.ಟಿ.ಕ್ಯೂ 2025**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು